**ಎಂವಿಸಿ ಸಂಖ್ಯೆಃ 1191/2021 ಆರ್.ಡಬ್ಲೂಃ1**

**ದಿನಾಂಕಃ 21-11-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.**

**ಮುಖ್ಯ ವಿಚಾರಣೆಃ 2 ನೇ ಎದುರುದಾರರ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಬಾಬ್ತು ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿ ಬರೆಸಿರುವ ಎಲ್ಲ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿ ಬರೆದಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಅಧಿಕಾರ ಪತ್ರವನ್ನು ನಿಆರ್-1 ಎಂದು ಗುರುತಿಸಲಾಯಿತು. ವಿಮಾ ಪಾಲಿಸಿಯನ್ನು ನಿಆರ್-2 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದ**

ರಾಣೆಬೆನ್ನೂರು ಗ್ರಾಮಾಂತರ ಪೊಲೀಸರು ನಮ್ಮ ವಿಮೆ ಹೊಂದಿತರಕ್ಕ ಲಾರಿ ಚಾಲಕನ ಮೇಲೆ ಆತನ ತಪ್ಪಿನಿಂದ ಅಪಘಾತ ಸಂಭವಿಸಿದೆ ಎಂದು ಅಪರಾಧಿಕ ಪ್ರಕರಣ ಸಂಖ್ಯೆ 138/2021 ದಾಖಲಿಸಿರುತ್ತಾರೆ ಎಂದರೆ ತಪ್ಪಾಗಿ ಸಲ್ಲಿಸಿರುತ್ತಾರೆ ಎಂದು ಹೇಳುತ್ತಾರೆ. ನಂತರ ಅಂತಿಮ ವರದಿ ಸಲ್ಲಿಸಿದ್ದು ಅಲ್ಲಿ ಪ್ರಧಾನ ಹಿರಿಯ ದಿವಾಣಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಸಲ್ಲಿಸಿದ್ದು ಅಲ್ಲಿ ಸಿಸಿ ನಂಬ್ರ 1117/2022 ದಾಖಲಿಸಿರುತ್ತಾರೆ ಎಂದರೆ ತಪ್ಪಾಗಿ ಸಲ್ಲಿಸಿರುತ್ತಾರೆ ಎಂದು ಹೇಳುತ್ತಾರೆ. ಅದರಲ್ಲಿ ಅಪಘಾತಕ್ಕೀಡು ಮಾಡಿದ ವಾಹನ ಚಾಲಕ ತನ್ನ ತಪ್ಪಾಗಿದೆ ಎಂದು ದಂಡ ತುಂಬಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಆ ದಾಖಲೆ ನಿಪಿ-11 ಎಂದು ಗುರುತಿಸಲಾಗಿದೆ ಎಂದರೆ ನನಗೆ ಗೊತ್ತಿಲ್ಲ. ಸದ್ರಿ ಪೊಲೀಸರು ನಮ್ಮ ವಿಮೆ ಇರುವ ವಾಹನ ರಸ್ತೆ ಮಧ್ಯದಲ್ಲಿ ಯಾವುದೇ ಇಂಡಿಕೇಟರ್ ಹಾಕದೇ ಪಾರ್ಕಿಂಗ್ ಲೈಟ್ ಹಾಕದೇ ಯಾವುದೇ ಬರುವ ವಾಹನಗಳಿಗೆ ಸೂಚನೆ ಕೊಡದೇ ನಿಲ್ಲಿಸಿದ್ದರಿಂದ ಅಪಘಾತ ಸಂಭವಿಸಿದೆ ಎಂದು ಅಭಿಪ್ರಾಯಪಟ್ಟಿರುತ್ತಾರೆ ಎಂದರೆ ಸರಿ ಅಲ್ಲ. ಅದೇ ಕಾರಣಕ್ಕಾಗಿ ಆರೋಪಿ ದಂಡ ಕಟ್ಟಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ.

ರಾತ್ರಿ ಸಮಯದಲ್ಲಿ ಯಾವುದೇ ಸೂಚನೆಯಿಲ್ಲದೇ ವಾಹನ ನಿಲ್ಲಿಸಿದ್ದೇ ಮೂಲ ಕಾರಣ ಅಪಘಾತಕ್ಕೆ ಎಂದರೆ ಸರಿ ಅಲ್ಲ. ಸದ್ರಿ ಲಾರಿ ಕ್ಯಾಬಿನ್‌ನಲ್ಲಿ ಕೂಡ ನಮ್ಮ ಚಾಲಕ ಇದ್ದಿರಲಿಲ್ಲ ಅಂತ ಕಂಡು ಬಂದಿದೆ ಎಂದರೆ ಸರಿ ಅಲ್ಲ. ಸದ್ರಿ ಅರ್ಜಿದಾರನ ವಿರುದ್ಧ ಸಲ್ಲಿಸಿದ ಅಂತಿಮ ವರದಿಯಲ್ಲಿ ನ್ಯಾಯಾಲಯವು ಆತನನ್ನು ದೋಷಮುಕ್ತಗೊಳಿಸಿದೆ

ಎಂದರೆ ನನಗೆ ಗೊತ್ತಿಲ್ಲ. ಸದ್ರಿ ಪ್ರಧಾನ ಹಿರಿಯ ದಿವಾಣಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯವು ಅರ್ಜಿದಾರನನ್ನು ನಿರ್ದೋಷಿ ಎಂದು ತೀರ್ಪು ನೀಡಿದ ವಿಷಯ ನನಗೆ ಗೊತ್ತಿದ್ದರೂ ಸಹ ಸಂಪೂರ್ಣ ಪರಿಹಾರ ಕೊಡುವ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಉದ್ದೇಶದಿಂದ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿ ಅಲ್ಲ. ಸದ್ರಿ ಅರ್ಜಿದಾರನಿಗೆ ಸಂಪೂರ್ಣ ಪರಿಹಾರ ಕೊಡುವ ಜವಾಬ್ದಾರಿ ನಮ್ಮ ವಿಮಾ ಕಂಪನಿ ಮೇಲಿದೆ ಎಂದರೆ ಸರಿ ಅಲ್ಲ.

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

**(ಓ.ಹೇ.ಕೇ.ಸ.)**

**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ರಾಣೆಬೆನ್ನೂರ.**

ಸಾಕ್ಷಿದಾರರ ಸಹಿಃ